# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಸಂಧ್ಯಾ ಸುರಕ್ಷಾ ಯೋಜನೆಯಡಿ ಮಾಸಾಶನ ಮಂಜೂರು ಮಾಡುವ ಅಧಿಕಾರವನ್ನು ವಿಶೇಷ ತಹಸೀಲ್ದಾರ್ ಕಛೇರಿ ಇರುವ ಕಡೆಗಳಲ್ಲಿ ಉಪತಹಸೀಲ್ದಾರ್‌ರಿಂದ ವಿಶೇಷ ತಹಸೀಲ್ದಾರರಿಗೆ ವರ್ಗಾಯಿಸುವ ಕುರಿತು.

**ಓದಲಾದ:**1) ಸರ್ಕಾರಿ ಆದೇಶ ಸಂಖ್ಯೆ: ಕಂ.ಇ 97 ಎಂ.ಎಸ್.ಟಿ. 2007, ದಿನಾಂಕ:02.07.2007.
2) ಸರ್ಕಾರಿ ಆದೇಶ ಸಂಖ್ಯೆ:ಕಂ.ಇ. 85 ಡಿ.ಎಸ್.ಪಿ. 2008 ದಿನಾಂಕ:23.09.2008.

**<u>ಪ್ರಸ್ತಾವನೆ:</u>**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಸರ್ಕಾರಿ ಆದೇಶದಲ್ಲಿ ಸರ್ಕಾರವು ಆರ್ಥಿಕವಾಗಿ ಸಂಕಷ್ಟದಲ್ಲಿರುವ 65 ವರ್ಷಗಳಿಗಿಂತಲೂ ಹೆಚ್ಚು ವಯಸ್ಸಾದ ಹಿರಿಯ ನಾಗರಿಕರಿಗೆ ನೆರವಾಗಲು ರೂ.400/-ಗಳ ಮಾಸಾಶನವನ್ನು ಸಂಧ್ಯಾ ಸುರಕ್ಷಾ ಯೋಜನೆಯನ್ವಯ ಜಾರಿಗೆ ತರಲಾಗಿದೆ. ಈ ಯೋಜನೆಯಡಿ ತಾಲ್ಲೂಕು ತಹಶಿಲ್ದಾರರು ಅರ್ಹ ಫಲಾನುಭವಿಗಳನ್ನು ಗುರುತಿಸಿ ಮಾಸಾಶನವನ್ನು ಮಂಜೂರು ಮಾಡುವ ಪ್ರಾಧಿಕಾರಿಯಾಗಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ಅದೇಶದನ್ವಯ ರಾಜ್ಯದಲ್ಲಿ ಸಂಧ್ಯಾ ಸುರಕ್ಷಾ ಯೋಜನೆಯಡಿ ಸಾಕಷ್ಟು ಅರ್ಜಿಗಳು ಬರುತ್ತಿದ್ದು, ಅವುಗಳನ್ನು ನಿಗದಿತ ವೇಳೆಯೊಳಗೆ ವಿಲೇವಾರಿ ಮಾಡಲು ತಾಲ್ಲೂಕಿನ ವಿವಿಧ ಭಾಗಗಳಿಂದ ತಾಲ್ಲೂಕು ಕಛೇರಿಗಳಿಗೆ ಬಂಧು ಅರ್ಜಿಗಳನ್ನು ಸಲ್ಲಿಸುವುದು ಸಹ ಕಷ್ಟವಾಗುತ್ತದೆ. ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾಗೊಳಿಸಲು ಹಾಗೂ ಹೆಚ್ಚಿನ ಪ್ರಗತಿಯನ್ನು ಸಾಧಿಸಲು ಮಾಸಾಶನ ಮಂಜೂರು ಮಾಡುವ ಅಧಿಕಾರವನ್ನು ನಾಡ ಕಛೇರಿಯ ಉಪ ತಹಶೀಲ್ದಾರರಿಗೆ ನೀಡಲಾಗಿದೆ.

ಮುಂದುವರೆದು ವಿಶೇಷ ತಹಸೀಲ್ದಾರರ ಕಛೇರಿ ಇರುವ ಕಡೆಗಳಲ್ಲಿ ವಿಶೇಷ ತಹಸೀಲ್ದಾರರು ಹಾಗೂ ಉಪ ತಹಸೀಲ್ದಾರರು ಇಬ್ಬರು ಇರುತ್ತಾರೆ. ಅಂತಹ ಸಂದರ್ಭದಲ್ಲಿ ವಿಶೇಷ ತಹಸೀಲ್ದಾರರು ನಾಡ ಕಛೇರಿಯ ಉಪ ತಹಸೀಲ್ದಾರರಿಗಿಂತ ಶ್ರೇಣಿಯಲ್ಲಿ ಮೇಲ್ಪಟ್ಟವರಾಗಿದ್ದು ಸಂಧ್ಯಾ ಸುರಕ್ಷಾ ಯೋಜನೆಯಡಿ ಮಾಸಾಶನ ಮಂಜೂರು ಮಾಡಬಹುದಾಗಿರುವುದರಿಂದ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 85 ಡಿಎಸ್‌ಪಿ 2008, ಬೆಂಗಳೂರು ದಿನಾಂಕ:12/01/2009.</u>**

ಸರ್ಕಾರವು ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸಂಧ್ಯಾ ಸುರಕ್ಷಾ ಯೋಜನೆಯಡಿ ಮಾಸಾಶನವನ್ನು ವಿಶೇಷ ತಹಸೀಲ್ದಾರ್ ಕಛೇರಿ ಇರುವ ಕಡೆಗಳಲ್ಲಿ ವಿಶೇಷ ತಹಸೀಲ್ದಾರರು ಹಾಗೂ ಉಪ ತಹಶೀಲ್ದಾರರು ಇಬ್ಬರು ಇದ್ದಲ್ಲಿ ಮಂಜೂರಾತಿ ಅಧಿಕಾರವನ್ನು ವಿಶೇಷ ತಹಸೀಲ್ದಾರರಿಗೆ ನೀಡಿ ಕೂಡಲೇ ಜಾರಿಗೆ ಬರುವಂತೆ ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಕಾತ್ಯಾಯಿನಿ ದೇವಿ) 12/1/09
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು,
ಕಂದಾಯ ಇಲಾಖೆ.

**ಇವರಿಗೆ,**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು.**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ.ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, (ಆಯವ್ಯಯ ಮತ್ತು ಸಂಪನ್ಮೂಲ), ವಿಧಾನ ಸೌಧ.
5. ಎಲ್ಲಾ ಪ್ರಾದೇಶಿಕ ಆಯುಕ್ತರು,
6. ಎಲ್ಲಾ ಜಿಲ್ಲಾಧಿಕಾರಿಗಳು.
7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
8. ಎಲ್ಲಾ ಉಪ ವಿಭಾಗಧಿಕಾರಿಗಳು
9. ಎಲ್ಲಾ ತಹಸೀಲ್ದಾರರುಗಳಿಗೆ.
10. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.